# ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ನಡೆಯಲಿ

ಬೆಂಗಳೂರು,ನ. 1– ಸ್ಥಳೀಯ ಸಂಸ್ಥೆಗಳಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ 25 ಸದಸ್ಯರು 2022 ರ ಜನವರಿ 5 ರಂದು ನಿವೃತ್ತಿಯಾಗಲಿದ್ದಾರೆ.

ಈ ಹಿನ್ನೆಲೆಯಲ್ಲಿ ನವಂಬರ್ ಅಂತ್ಯ ಅಥವಾ ಡಿಸೆಂಬರ್ ಮೊದಲ ವಾರದಲ್ಲಿ ವಿಧಾನ ಮಂಡಲದ ಚಳಿಗಾಲದ ಅಧಿವೇಶನ ಬೆಳಗಾವಿಯಲ್ಲಿ ನಡೆಸುವಂತೆ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಅವರು ಮುಖ್ಯಮಂತ್ರಿ ಬಸವರಾಜ ಬೊಮ್ಮಾಯಿ ಅವರಿಗೆ ಆಗ್ರಹಿಸಿದ್ದಾರೆ.



ಈ ಕುರಿತಂತೆ ಪತ್ರ ಬರೆದಿರುವ ಸಭಾಪತಿಗಳು ಸ್ಥಳೀಯ ಸಂಸ್ಥೆಗಳ ಕ್ಷೇತ್ರದಿಂದ ವಿಧಾನ ಪರಿಷತ್ತಿಗೆ ಆಯ್ಕೆಯಾಗಿರುವ 25 ಜನ ಸದಸ್ಯರುಗಳು 2022 ರ ಜನವರಿ 5 ರಂದು ನಿವೃತ್ತಿ ಹೊಂದಲಿದ್ದಾರೆ ಹೀಗಾಗಿ ವಿಧಾನಮಂಡಲ ಅಧಿವೇಶನಕ್ಕೆ ದಿನಾಂಕ ನಿಗದಿ ಮಾಡಿ ಎಂದು ಒತ್ತಾಯಿಸಿದ್ದಾರೆ.

ನಿವೃತ್ತಿಗೊಳ್ಳಲಿರುವ 25 ಜನ ವಿಧಾನ ಪರಿಷತ್ತಿನ ಸದಸ್ಯರಿಗೆ ಚಳಿಗಾಲದ ಅಧಿವೇಶನದಲ್ಲಿ ಪಾಲ್ಗೊಳ್ಳಲು ಅವಕಾಶ ದೊರೆಯಲಿದ್ದು, ತಮ್ಮ ಕ್ಷೇತ್ರಗಳಿಗೆ ಸಂಬಂಧಿಸಿದ ಸಮಸ್ಯೆಗಳ ಕುರಿತು ಚರ್ಚೆ ನಡೆಸಿ ಪರಿಹಾರ ಕಂಡುಕೊಳ್ಳಲು ಅವರಿಗೆ ಅನುಕೂಲವಾಗಲಿದೆ ಇದನ್ನು ಗಮನದಲ್ಲಿಟ್ಟುಕೊಂಡು ನಿರ್ಧಾರ ಕೈಗೊಳ್ಳುವಂತೆ ಅವರು ಸಲಹೆ ನೀಡಿದ್ದಾರೆ.

ಈ ಬಾರಿಯ ವಿಧಾನ ಮಂಡಲದ ಚಳಿಗಾಲದ ಅಧಿವೇಶನವನ್ನು ಬೆಳಗಾವಿಯ ಸುವರ್ಣಸೌಧದಲ್ಲಿ ನಡೆಸುವ ಕುರಿತು ಈಗಾಗಲೇ ಮುಖ್ಯಮಂತ್ರಿಗಳೊಂದಿಗೆ ಚರ್ಚಿಸಲಾಗಿದ್ದು ಅವರು ಸಹ ಅದಕ್ಕೆ ಒಪ್ಪಿಗೆ ಸೂಚಿಸಿದ್ದಾರೆ ಅಲ್ಲದೇ ಬೆಳಗಾವಿಯಲ್ಲಿ ಅಧಿವೇಶನ ನಡೆಸುವ ಕುರಿತು ಮಾಧ್ಯಮಗಳಲ್ಲಿ ಹೇಳಿಕೆಗಳು ಪ್ರಕಟಗೊಂಡಿವೆ. ಹೀಗಾಗಿ ಅಧಿವೇಶನ ನಡೆಸುವ ಸಂಬಂಧ ಮುಂದಿನ ಕ್ರಮ ಜರುಗಿಸುವಂತೆ ಅವರು ಪತ್ರದಲ್ಲಿ ತಿಳಿಸಿದ್ದಾರೆ.

Sanjevani 01.11.2021